ಮೆಡಿಕಲ್ ಕಾಲೇಜಿಗೆ ಸಿಬ್ಬಂದಿಗಳ ನೇಮಕಾತಿ

401(681); ಶ್ರೀ ಅಪ್ಪಚ್ಚು ರಂಜನ್

ಅ) ಕೊಡಗು ಜಿಲ್ಲೆಯಲ್ಲಿ ಮಂಜೂರಾಗಿರುವ ಮೆಡಿಕಲ್ ಕಾಲೇಜಿಗೆ ಮಂಜೂರಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಆ) ನೇಮಕಾತಿಗೊಂಡಿರುವ ಸಿಬ್ಬಂದಿಗಳ ಪ್ರಸ್ತುತ ಮೆಡಿಕಲ್ ಕಾಲೇಜು ಪ್ರಾರಂಭವಾಗುವವರೆಗೆ ಎಲ್ಲಿ ಕರ್ತವ್ಯ ನಿರ್ವಹಿಸುತ್ತಾರೆ.

ಇ) ಜಿಲ್ಲೆಯಲ್ಲಿ ಖಾಲಿ ಇರುವ ಆಸ್ಪತ್ರೆಗಳಿಗೆ ಸದರಿ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನೇಮಿಸಿಕೊಳ್ಳಲು ಸರ್ಕಾರ ಏನು ಕ್ರಮ ಕೈಗೊಂಡಿದೆ (ಪೂರ್ಣ ವಿವರ ನೀಡುವುದು)?

ಡಾ॥ ಶರಣ ಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಒಟ್ಟು 105 ಬೋಧಕ ಸಿಬ್ಬಂದಿಗಳು ಹಾಗೂ 247 ಬೋಧಕೇತರ ಹುದ್ದೆಗಳು ಮಂಜೂರಾಗಿರುತ್ತವೆ.

ಆ) ಮತ್ತು ಇ) ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ 2015–16 ನೇ ಸಾಲಿನಿಂದ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ. ಈ ವೈದ್ಯಕೀಯ ಕಾಲೇಜಿನ ತಪಾಸಣೆಗೆ ಎಂಸಿಐ ತಪಾಸಣಾ ತಂಡವು ಅನಿರೀಕ್ಷಿತ ಭೇಟಿ ನೀಡುವ ಸಂಭವವಿದ್ದು, ಈ ವೈದ್ಯಕೀಯ ಕಾಲೇಜಿನಲ್ಲಿ ನೇಮಕಾತಿ ಹೊಂದಿರುವ ಬೋಧಕ ಸಿಬ್ಬಂದಿಗಳು ಎಂಸಿಐ ತಂಡವು ತಪಾಸಣೆ ನಡೆಸುವ ಸಂದರ್ಭದಲ್ಲಿ ಹಾಜರಿರುವುದು ಕಡ್ಡಾಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸದರಿ ಸಿಬ್ಬಂದಿಗಳ ಸೇವೆಯನ್ನು ವೈದ್ಯಕೀಯ ಕಾಲೇಜಿನ ಕರ್ತವ್ಯಗಳ ಜೊತೆಗೆ ಜಿಲ್ಲಾ ಆಸ್ಪತ್ರೆಯ ತುರ್ತು ಸೇವೆಗಳ ವಿಭಾಗದಲ್ಲಿ ಉಪಯೋಗಿಸಿಕೊಳ್ಳಲಾಗುತ್ತಿದೆ.